ಪಟ್ಟಿಯನ್ನು ಕಳುಹಿಸಿದ್ದು, ನೇಮಕಾತಿ ಆದೇಶ ನೀಡುವ ಪ್ರಕ್ರಿಯೆ ಜಾರಿಯಲ್ಲಿದೆ.

9. ಇಲಾಖೆಯಲ್ಲಿ ಒಟ್ಟು 13965 ಗ್ರೂಪ್–ಡಿ ನೌಕರರ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 4067 ಹುದ್ದೆಗಳು ಖಾಲಿಯಿವೆ. ಸದರಿ ಖಾಲಿ ಹುದ್ದೆಗಳ ಪೈಕಿ 2323 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಇತ್ತೀಚೆಗೆ ಮಂಜೂರಾತಿ ನೀಡಿದೆ.

ಸರ್ಕಾರಿ ಆಸ್ಪತ್ರೆ ಮೇಲ್ದರ್ಜೆಗೇರಿಸುವುದು

287 (716) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭದ್ರಾವತಿ ನಗರದಲ್ಲಿರುವ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯನ್ನು 150 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

ಇ) ಇದನ್ನು ಯಾವಾಗ ಮೇಲ್ದರ್ಜೆಗೇರಿಸಲಾಗುವುದು ?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ), ಆ) ಮತ್ತು ಇ) ಭದ್ರಾವತಿ ಸಾರ್ವಜನಿಕ ಆಸ್ಪತ್ರೆಯನ್ನು 100 ಹಾಸಿಗೆಗಳಿಂದ 150 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಸ್ವೀಕೃತವಾಗಿದೆ. ಸದರಿ ಆಸ್ಪತ್ರೆಯು 100 ಹಾಸಿಗೆಗಳ ಸಾಮರ್ಥ್ಯ ಹೊಂದಿದ್ದು, ಕಳೆದ 3 ವರ್ಷಗಳಲ್ಲಿ ಇದರ ಹಾಸಿಗೆ ಬಳಕೆ ಪ್ರಮಾಣವು ಕ್ರಮವಾಗಿ ಶೇಕಡ 30.34, ಶೇಕಡ 33.87 ಮತ್ತು ಶೇಕಡ 48.52ರಷ್ಟಿದೆ.

ರಾಜ್ಯದಲ್ಲಿ ಹೊಸ ಆಸ್ಪತ್ರೆಗಳ ಪ್ರಾರಂಭಿಸುವಿಕೆ ಮತ್ತು ಮೇಲ್ದರ್ಜೆಗೇರಿಸುವಿಕೆ ಬದಲಾಗಿ ಅಸ್ತಿತ್ವದಲ್ಲಿರುವ ಆಸ್ಪತ್ರೆಗಳಿಗೆ ಮೂಲ ಸೌಕರ್ಯಗಳಾದ ಕಟ್ಟಡ, ಉಪಕರಣಗಳು, ವೈದ್ಯರು ಮತ್ತು ಸಿಬ್ಬಂದಿ ಒದಗಿಸಿ ಅವುಗಳ ಬಲವರ್ಧನೆಗೆ ಹೆಚ್ಚು ಗಮನಹರಿಸಬೇಕಾಗಿದೆ. ಆದುದರಿಂದ, ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಯ ಮೇಲ್ದರ್ಜೆಗೇರಿಸುವಿಕೆಯನ್ನು ದಿನಾಂಕ : 11–01–2011 ರಿಂದ ಮೂರು ವರ್ಷಗಳ ಅವಧಿಗೆ ಒಂದು ನೀತಿ ನಿರ್ಣಯವಾಗಿ ಸರ್ಕಾರವು ತಡೆಹಿಡಿದಿದೆ.